# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ 200 ಮೆ.ವ್ಯಾ. ಸಾಮರ್ಥ್ಯದ ಸೋಲಾರ್ ಘಟಕಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ (ಕ್ರೆಡಲ್) ವತಿಯಿಂದ ಸ್ಥಾಪಿಸುವುದರ ಬಗ್ಗೆ.

ಓದಲಾಗಿದೆ:

1. ಸೌರ ವಿದ್ಯುತ್ ನೀತಿ 2014-21 ಅಧಿಸೂಚನೆ ಸಂಖ್ಯೆ: ಇಎನ್ 21 ವಿಎಸ್‌ಸಿ 2014 ದಿನಾಂಕ: 22.05.2014.
2. ಸರ್ಕಾರಿ ಆದೇಶ ಸಂಖ್ಯೆ:ಇಎನ್26ವಿಎಸ್‌ಸಿ2015 ದಿನಾಂಕ:02.02.2016.
3. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್‌ರವರ ಪತ್ರ ಸಂಖ್ಯೆ: ಕೆ.ಆರ್.ಇ.ಡಿ.ಎಲ್/07/ಎಸ್‌ಜಿ-385/2017/367 ದಿನಾಂಕ: 17.01.2017.

********

ಪ್ರಸ್ತಾವನೆ:

ರಾಜ್ಯದಲ್ಲಿ ಸೋಲಾರ್ ಪಾರ್ಕ್ ಅಭಿವೃದ್ಧಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಮತ್ತು ಕೇಂದ್ರ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿರುವ M/s. Solar Energy Corporation of India Limited (SECI) ಜಂಟಿ ಸಹಯೋಗದೊಂದಿಗೆ ಕರ್ನಾಟಕ ಸೌರ ಶಕ್ತಿ ಅಭಿವೃದ್ಧಿ ನಿಯಮಿತ(ಕೆ.ಎಸ್.ಪಿ.ಡಿ.ಸಿ.ಎಲ್) ಕಂಪನಿಯನ್ನು ರಚಿಸಲಾಗಿರುತ್ತದೆ. ಸದರಿ ಕಂಪನಿಯು ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ನಾಗಲಮಡಿಕೆ ಹೋಬಳಿಯ ವಳ್ಳೂರು, ಕ್ಯಾತಗಾನಚೆರ್ಲು, ಬಳಸಮುದ್ರ, ತಿರುಮಣಿ, ರಾಯಚೆರ್ಲು ಗ್ರಾಮಗಳಲ್ಲಿ ಸುಮಾರು 2000ಮೆ.ವ್ಯಾ ಸಾಮರ್ಥ್ಯದ ಸೋಲಾರ್ ಪಾರ್ಕ್ ಸ್ಥಾಪಿಸಲು ಕ್ರಮಕೈಗೊಳ್ಳಲಾಗಿದೆ. ರಾಷ್ಟ್ರೀಯ ಶಾಖೋತ್ಪನ್ನ ವಿದ್ಯುತ್ ನಿಗಮ ನಿಯಮಿತ(ಎನ್.ಟಿ.ಪಿ.ಸಿ) ರವರಿಂದ 1600 ಮೆ.ವ್ಯಾ. ಮತ್ತು M/s. SECI ರವರಿಂದ 200 ಮೆ.ವ್ಯಾ. ಸಾಮರ್ಥ್ಯದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಎನ್.ಟಿ.ಪಿ.ಸಿ ರವರಿಗೆ ಈಗಾಗಲೇ ಸೋಲಾರ್ ಪಾರ್ಕ್‌ನಲ್ಲಿ ಒಟ್ಟು 900ಮೆ.ವ್ಯಾ (600ಮೆ.ವ್ಯಾ. ಸೌರ ವಿದ್ಯುತ್:300ಮೆ.ವ್ಯಾ ಶಾಖೋತ್ಪನ್ನ ವಿದ್ಯುತ್) ಸಾಮರ್ಥ್ಯದ ಸಂಯೋಜಿತ ವಿದ್ಯುತ್‌ಗೆ ಮೇಲೆ ಓದಲಾದ (2)ರಲ್ಲಿ ವಿದ್ಯುತ್ ಹಂಚಿಕೆಯನ್ನು ನೀಡಲಾಗಿದೆ.

ಪ್ರಸ್ತುತ ಮೇಲೆ ಓದಲಾದ (3)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು ಕ್ರೆಡಲ್‌ರವರು ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ ಒಟ್ಟು ಸಾಮರ್ಥ್ಯದ 2000 ಮೆ.ವ್ಯಾ. ನಲ್ಲಿ ಬಾಕಿ ಉಳಿದಿರುವ 200 ಮೆ.ವ್ಯಾ. ಸಾಮರ್ಥ್ಯಕ್ಕೆ ಸೌರ ವಿದ್ಯುತ್ ಘಟಕವನ್ನು ಕ್ರೆಡಲ್ ವತಿಯಿಂದ ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಮುಂದುವರೆದು, ಘಟಕವನ್ನು ಸ್ಥಾಪಿಸುವ ಸಲುವಾಗಿ ಕ್ರೆಡಲ್ ವತಿಯಿಂದ ಟೆಂಡರ್ ಕರೆಯಲು ಸಿದ್ಧತೆ ಮಾಡಿಕೊಳ್ಳಲು, ವಿದ್ಯುತ್ ಸರಬರಾಜು ಕಂಪನಿಗಳಿಗೆ ವಿದ್ಯುತ್ ಮಾರಾಟ ದರವು ಟೆಂಡರ್‌ನಲ್ಲಿ ಸ್ವೀಕೃತವಾಗುವ ಮೊತ್ತವನ್ನು ಅವಲಂಬಿಸಿರುವ ಪ್ರಯುಕ್ತ ಟೆಂಡರ್ ಪ್ರಕ್ರಿಯೆ ನಂತರ ವಿದ್ಯುತ್ ದರದ ಕುರಿತು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ (ಕೆ.ಇ.ಆರ್.ಸಿ) ಮುಂದೆ ಮಂಡಿಸಿ ನಿರ್ಧಾರಿಸಬೇಕಾಗಿರುತ್ತದೆ ಎಂದು ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ.

GM (Tech) I/C
KREDL



301

ಕ್ರೆಡಲ್‌ನ ಪ್ರಸ್ತಾವನೆಯಂತೆ, ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನಲ್ಲಿ 200 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಕ್ರೆಡಲ್ ವತಿಯಿಂದ ಅನುಷ್ಠಾನಗೊಳಿಸಲು, ಈ ಕೆಳಗಿನ ಆದೇಶ:

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 19 ವಿಎಸ್‌ಇ 2017,**

**ಬೆಂಗಳೂರು, ದಿನಾಂಕ:07.02.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ತುಮಕೂರು ಜಿಲ್ಲೆಯ ಪಾವಗಡ ಸೋಲಾರ್ ಪಾರ್ಕಿನ 2000ಮೆ.ವ್ಯಾ. ಸಾಮರ್ಥ್ಯದಲ್ಲಿ ಉಳಿದಿರುವ 200ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ (ಕ್ರೆಡಲ್) ವತಿಯಿಂದ ಅನುಷ್ಠಾನಗೊಳಿಸಲು ಆದೇಶಿಸಿದೆ.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತವು KTPP ಅಧಿನಿಯಮದನ್ವಯ ಮುಂದಿನ ಕ್ರಮ ಜರುಗಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇವರಿಗೆ,
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯ ಪತ್ರ ಪ್ರಕಟಣೆಗಾಗಿ.

ಪ್ರತಿಗಳು:-

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಶಕ್ತಿ ಭವನ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಮೆಸ್ಕಾಂ, ಜೆಸ್ಕಾಂ, ಹೆಸ್ಕಾಂ, ಸೆಸ್ಕ್.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, "ಶಾಂತಿ ಗೃಹ" ಪ್ಯಾಲೆಸ್ ರಸ್ತೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಬಿಲ್ಡಿಂಗ್, ಬೆಂಗಳೂರು-560001.
5. ವ್ಯವಸ್ಥಾಪಕ ನಿರ್ದೇಶಕರು ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಕಾವೇರಿ ಭವನ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ಸೌರಶಕ್ತಿ ಅಭಿವೃದ್ಧಿ ನಿಗಮ ನಿಯಮಿತ, ನಂ. 39, "ಶಾಂತಿ ಗೃಹ" ಪ್ಯಾಲೆಸ್ ರಸ್ತೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಬಿಲ್ಡಿಂಗ್, ಬೆಂಗಳೂರು-560001.
7. ಎನ್.ಟಿ.ಪಿ.ಸಿ ಲಿಮಿಟೆಡ್, #29/ಎ, ಇಂದಿರಾನಗರ 1ನೇ ಹಂತ, 100 ಫಿಟ್ ರಸ್ತೆ, ಬೆಂಗಳೂರು-38.
8. ಕಾರ್ಯದರ್ಶಿಗಳು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, ಎಂ.ಜಿ. ರಸ್ತೆ ಬೆಂಗಳೂರು.
9. ಮುಖ್ಯ ವಿದ್ಯುತ್ ಪರಿವೀಕ್ಷಕರು, ನಂ :32/1-2, ಕ್ರೆಸೆಂಟ್ ಟವರ್ಸ್, ಕ್ರೆಸೆಂಟ್ ರಸ್ತೆ ಬೆಂಗಳೂರು.
10. ಮುಖ್ಯ ಇಂಜಿನಿಯರ್ (ವಿ), ವಿದ್ಯುತ್ ರವಾನೆ ಕೇಂದ್ರ, ಆನಂದ ರಾವ್ ವೃತ್ತ, ಬೆಂಗಳೂರು.

11. ಮಾನ್ಯ ಇಂಧನ ಸಚಿವರ ವಿಶೇಷಾಧಿಕಾರಿಗಳು/ ಆಪ್ತಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
12. ನಿರ್ದೇಶಕರು (ಆರ್ಥಿಕ) /ಅಪರ ನಿದೇಶಕರು(ಇಎಂಸಿ)/ ತಾಂತ್ರಿಕ ಮೇಲ್ವಿಚಾರಣೆ (ಯೋಜನೆ)/ ಜಂಟಿ ನಿದೇಶಕರು (ನ.ಇಂ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
14. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
16. ಶಾಖಾ ರಕ್ಷಾ ಕಡತ/ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.